# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಸಂಖ್ಯೆ | : | 974 |
| ಸದಸ್ಯರ ಹೆಸರು | : | ಶ್ರೀ.ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 24-02-2022. |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಯವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಕುಮಾರ್‌ನಾಯಕ್ ವರದಿಯನ್ವಯ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ಬೋಧಕರಿಗೆ ಒಂದು ವೇತನ ಬಡ್ತಿ ನೀಡುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; ಪ್ರಸ್ತಾವನೆ ಯಾವ ಹಂತದಲ್ಲಿದೆ; | "ಜೂನ್-2016ರಂದು ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಶಿಕ್ಷಣ ಶಿಲಾಖೆಯು ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ".<br><br>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿನ ಶಿಕ್ಷಕರು ಮೇ/ಜೂನ್-2016 ರಿಂದ ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹೊಸದಾಗಿ ನೇರ ನೇಮಕಾತಿ ಹೊಂದಿ ಕಾರ್ಯನಿರ್ವಹಿಸುತ್ತ ಇರುವುದರಿಂದ ಸದರಿ ಬೋಧಕ ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಮಾದರಿಯಲ್ಲಿ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆ ಪರಿಶೀಲಿಸಲಾಗುತ್ತಿದೆ. |
| ಆ. | ಈ ಒಂದು ವೇತನ ಬಡ್ತಿಯನ್ನು ನೀಡಲು ಇರುವ ಸಮಸ್ಯೆಗಳೇನು; ಈ ಸಮಸ್ಯೆಯನ್ನು ಸರಿಪಡಿಸಲು ಕ್ರಮವಹಿಸಲಾಗುವುದೇ? (ವಿವರ ನೀಡುವುದು) | ಶಿಕ್ಷಣ ಇಲಾಖೆ (ಪ್ರೌಢ ಶಿಕ್ಷಣ) ದಿನಾಂಕ:15.04.2016ರ ಆದೇಶದ ಅನುಸಾರ ಜೂನ್-2016ರಂದು ಕಾರ್ಯನಿರ್ವಹಿಸುತಿದ್ದ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಿದ್ದು, ಈ ಇಲಾಖೆಯಿಂದ ಅದೇ ಅವಧಿಯಲ್ಲಿ ನೇಮಕಗೊಂಡಿರುವುದರಿಂದ ಈ ಬಗ್ಗೆ ಪರಿಶೀಲಿಸಿ ಆದಷ್ಟು ಬೇಗ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ : MWD 66 LMQ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ